# ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ

**ಜ್ಞಾನ ಸಾಗರ ಆವರಣ, ವಿನಾಯಕನಗರ, ಕಂಟೋನ್ಮೆಂಟ್, ಬಳ್ಳಾರಿ – 583104**


**ಪ್ರೊ. ಶಶಿಕಾಂತ ಎಸ್ ಉಡಿಕೇರಿ**

**ಕುಲಸಚಿವರು(ಮೌಲ್ಯಮಾಪನ)**

**ದೂರವಾಣಿ: 08392–241011**


ಸಂಖ್ಯೆ: ವಿಶ್ರೀಕೃವಿಬ/ಸ್ನಾತಕ/ಪರೀಕ್ಷಾ/2021–22/ 845 ದಿನಾಂಕ: 21.10.2021

## ಅಧಿಸೂಚನೆ

ವಿಷಯ: ಸ್ನಾತಕ ಪದವಿಯ ಅಂತಿಮ ಸೆಮಿಸ್ಟರ್‌ನ ಮರು ಎಣಿಕೆ, ಛಾಯಾಪ್ರತಿ ಹಾಗೂ ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 21.10.2021

*****

ಸೆಪ್ಟಂಬರ್–2021ರ ತಿಂಗಳಿನಲ್ಲಿ ಜರುಗಿದ ಎಲ್ಲಾ ಸ್ನಾತಕ ಪದವಿ * ಪರೀಕ್ಷೆಗಳ ಅಂತಿಮ ಸೆಮಿಸ್ಟರ್ (Regular) & (Repeater) ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳ ಮರು ಎಣಿಕೆ, ಛಾಯಾ ಪ್ರತಿ ಹಾಗೂ ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ದಿನಾಂಕಗಳು ಈ ಕೆಳಗಿನಂತಿವೆ.

| ಕ್ರ.ಸಂ | ವಿವರ | ಶುಲ್ಕ | ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ |
|---|---|---|---|
| 01 | ಮರು ಎಣಿಕೆ | ಒಂದು ವಿಷಯಕ್ಕೆ 209/– | 21.10.2021 ರಿಂದ 25.10.2021 * |
| 02 | ಛಾಯಾ ಪ್ರತಿ | ಒಂದು ವಿಷಯಕ್ಕೆ 418/– | |
| 03 | ಮರು ಮೌಲ್ಯಮಾಪನ | ಒಂದು ವಿಷಯಕ್ಕೆ 974/– | 21.10.2021 ರಿಂದ 29.10.2021 * |

*** ಬಿ.ಕಾಂ ವಿದ್ಯಾರ್ಥಿಗಳಿಗೆ ಪರೀಕ್ಷಾ ಪರಿಣಾಮ ಘೋಷಣೆಯ ದಿನದಿಂದ ಅನ್ವಯಿಸುತ್ತದೆ.**

**ಸೂಚನೆಗಳು:**

1. ಆನ್‌ಲೈನ್ (Online) ಮುಖಾಂತರ ಅರ್ಜಿ ಸಲ್ಲಿಸಲು http://student.logisys.org/vskub/ ನಲ್ಲಿ login ಆಗಿ ನೋಂದಣಿ ಸಂಖ್ಯೆ, ನಮೂದಿಸಿ ನಿಗದಿತ ದಿನಾಂಕದೊಳಗೆ ಅರ್ಜಿ ಸಲ್ಲಿಸತಕ್ಕದ್ದು.
2. ಮರು ಎಣಿಕೆ, ಛಾಯಾ ಪ್ರತಿ ಹಾಗೂ ಮರು ಮೌಲ್ಯಮಾಪನಕ್ಕಾಗಿ ಯಾವ ಯಾವ ವಿಷಯಗಳಲ್ಲಿ ಅರ್ಜಿ ಸಲ್ಲಿಸಬೇಕೊ ಅವುಗಳನ್ನು ಆಯ್ಕೆ ಮಾಡಿಕೊಳ್ಳತಕ್ಕದ್ದು.
3. ವಿಷಯ ಆಯ್ಕೆ ಮಾಡಿದ ತಕ್ಷಣ ಅದಕ್ಕೆ ಸಂಬಂಧಿಸಿದ ಶುಲ್ಕ ಪ್ರಕಟಗೊಳ್ಳುವುದು. ನಂತರ ಶುಲ್ಕ ಪಾವತಿಸುವ ಬಗೆಯನ್ನು ಆಯ್ದುಕೊಂಡ ಮೇಲೆ ಅರ್ಜಿ ಹಾಗೂ ಚಲನ್‌ಗಳ ಮುದ್ರಿತ ಪ್ರತಿಯನ್ನು ಸಂಬಂಧಿಸಿದ ಕಾಲೇಜಿಗೆ ನೀಡಿ ಒಂದನ್ನು ಚಲನ್ ತಮ್ಮ ಬಳಿಯೇ ಇರಿಸಿಕೊಳ್ಳತಕ್ಕದ್ದು.
4. ಮರು ಎಣಿಕೆ ಮತ್ತು ಮರು ಮೌಲ್ಯಮಾಪನದ ಫಲಿತಾಂಶವನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಹಾಗೂ ಛಾಯಾ ಪ್ರತಿಯನ್ನು ವಿದ್ಯಾರ್ಥಿಗಳ ಈ–ಮೇಲ್ ವಿಳಾಸಕ್ಕೆ ಕಳುಹಿಸಲಾಗುವುದು.
5. ವಿದ್ಯಾರ್ಥಿಗಳು ತಮ್ಮ ಈ–ಮೇಲ್ ವಿಳಾಸವನ್ನು ಕಡ್ಡಾಯವಾಗಿ ಅರ್ಜಿಯಲ್ಲಿ ನಮೂದಿಸತಕ್ಕದ್ದು ಹಾಗೂ ತಪ್ಪಾಗಿ ನಮೂದಿಸುವ ಈ–ಮೇಲ್ ವಿಳಾಸಕ್ಕೆ ವಿದ್ಯಾರ್ಥಿಗಳೇ ಹೊಣೆಗಾರರಾಗಿರುತ್ತಾರೆ.
6. ಛಾಯಾ ಪ್ರತಿಯನ್ನು ಪಡೆದುಕೊಂಡ ನಂತರ ಉತ್ತರ ಪತ್ರಿಕೆಯ ಅಂಕಗಳ ಎಣಿಕೆಯಲ್ಲಿ ಏನಾದರೂ ವ್ಯತ್ಯಾಸ ಕಂಡುಬಂದಲ್ಲಿ ಅದನ್ನು ಒಂದು ವಾರದೊಳಗೆ ಸರಿಪಡಿಸಿಕೊಳ್ಳತಕ್ಕದ್ದು. ನಂತರ ಬಂದ ಅಹವಾಲುಗಳನ್ನು ಸ್ವೀಕರಿಸಲಾಗುವುದಿಲ್ಲ. ಹಾಗೂ ಸದರಿ ಅಧಿಸೂಚನೆಯ ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ.

21/10/21

ಕುಲಸಚಿವರು(ಮೌಲ್ಯಮಾಪನ)
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ
ಬಳ್ಳಾರಿ

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರಿಗೆ ಮಾಹಿತಿಗಾಗಿ.
2. ಹಣಕಾಸು ಅಧಿಕಾರಿಗಳು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರಿಗೆ ಮಾಹಿತಿಗಾಗಿ.
3. ಮೆ.ಲಾಜಿಸಿಸ್ ವಿಭಾಗ, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರಿಗೆ ಮಾಹಿತಿಗಾಗಿ.
4. ಕಛೇರಿ ಪ್ರತಿ.